ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಗೊಂದಲ)

ಶ್ರೀ ಎಸ್. ಸಿದ್ದರಾಮಯ್ಯ (ವಿರೋಧ ಪಕ್ಷದ ನಾಯಕರು): ಮಾನ್ಯ ಅಧ್ಯಕ್ಷರೆ, ಪ್ರಜಾಪ್ರಭುತ್ವದ ರೀತಿ ಅಲ್ಲ ಇದು, ಪ್ರಜಾಪ್ರಭುತ್ವದ ಕಗ್ಗೊಲೆ.XXX ಸರ್ಕಾರ ಪ್ರಜಾಪ್ರಭುತ್ವದ ಕಗ್ಗೊಲೆ ಮಾಡುತ್ತಿದೆ. ಅವರಿಗೇನೂ ನಾಚಿಕೆ ಇಲ್ಲ. ನಾವು ಬಾವಿಯಲ್ಲಿ ಇದ್ದರೂ ಕೂಡ ಬಿಲ್‌ಗಳನ್ನೆಲ್ಲಾ ಪಾಸ್ ಮಾಡಿಕೊಳ್ಳುತ್ತಿದ್ದೀರಿ. House Order ನಲ್ಲಿ ಇಲ್ಲದೆ ಇದ್ದರೂ ಕೂಡ ಮಾಡಿಕೊಳ್ಳುತ್ತಿದ್ದೀರಿ. ನಾವು ಇದನ್ನು ವಿರೋಧ ಮಾಡಿ, ನಾವು ಇದನ್ನು ಖಂಡಿಸಿ, ಪ್ರಜಾಪ್ರಭುತ್ವದ ಕಗ್ಗೊಲೆಯನ್ನು ಖಂಡಿಸಿ ನಾವು ಇವತ್ತು ಇಧ್ಧನ್ನು ಪ್ರತಿಭಟಿಸಿ ನಾವೆಲ್ಲರೂ ಬಾಯ್‌ಕಾಟ್ ಮಾಡಿ ಹೊರಗಡೆ ಹೋಗುತ್ತಿದ್ದೇವೆ.

7. (ಕಾಂಗ್ರೆಸ್ ಹಾಗೂ ಜೆ. ಡಿ. ಎಸ್. ಶಾಸಕಾಂಗ ಪಕ್ಷದ ಶಾಸಕರು ಸಭಾತ್ಯಾಗ ಮಾಡಿದರು).

8. ಶಾಸನ ರಚನೆ:

ಪರ್ಯಾಲೋಚನಾ ಪ್ರಸ್ತಾವ (ಮುಂದುವರೆದು)

1. ಕರ್ನಾಟಕ ಸಹಕಾರ ಸಂಘಗಳ(ತಿದ್ದುಪಡಿ) ವಿಧೇಯಕ, 2011

ಶ್ರೀ ಲಕ್ಷ್ಮಣ ಎಸ್. ಸವದಿ (ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು): ಮಾನ್ಯ ಅಧ್ಯಕ್ಷರೆ, 2011 ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮುಂದೆ ಮತಕ್ಕೆ ಹಾಕುತ್ತೇನೆ.

"2001ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಈ- ಸಭೆಯು ಪರ್ಯಾಲೋಚಿಸುತ್ತದೆ" ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

(ಮಾನ್ಯ ಸಭಾಧ್ಯಕ್ಷರ ಆದೇಶದ ಮೇರೆಗೆ ಕಡತದಿಂದ ತೆಗೆದುಹಾಕಲಾಗಿದೆ)

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ.

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.

ಖಂಡ 2 ಮತ್ತು 3

ಅಧ್ಯಕ್ಷರು: "2 ಮತ್ತು 3ನೇ ಖಂಡ ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ"

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ.

(ಖಂಡ 2 ಮತ್ತು 3ನೇ ಖಂಡಗಳು ವಿಧೇಯಕದ ಅಂಗವಾದವು)

ಮೊದಲನೆಯ ಖಂಡ ಹೆಸರು ಮತ್ತು ಅವತರಣಿಕೆ

ಅಧ್ಯಕ್ಷರು: ಮೊದಲನೆ ಖಂಡ ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಭಾಗವಾಗಿರಬೇಕೆ ಎಂಬುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

(ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಅಂಗವಾದವು)

ಪ್ರಸ್ತಾವದ ಅಂಗೀಕಾರ

ಶ್ರೀ ಲಕ್ಷ್ಮಣ ಎಸ್. ಸವದಿ (ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು): ಮಾನ್ಯ ಅಧ್ಯಕ್ಷರೆ, 2011 ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

"2011ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು"

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

2. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ 2011.

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು ಹಾಗೆ ಸಂಸದೀಯ ವ್ಯವಹಾರಗಳ ಸಚಿವರು) (ಉನ್ನತ ಶಿಕ್ಷಣ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2011 ನೇ ಸಾಲಿನ ಕರ್ನಾಟಕ **ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ)** ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.